ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 633

ಸದಸ್ಯರ ಹೆಸರು : ಶ್ರೀ ಸಿ.ಆರ್. ಮನೋಹರ್

ಉತ್ತರಿಸಬೇಕಾದ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿ, ಸಾರಿಗೆ ಸಚಿವರು

ಉತ್ತರಿಸಬೇಕಾಗಿದ್ದ ದಿನಾಂಕ : 25-07-2019

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
(ಅ)	ರಾಜ್ಯದ ಖಾಸಗಿ ಬಸ್ ಮಾಲೀಕರುಗಳು ವಿಶೇಷ ಸಂದರ್ಭದಲ್ಲಿ (ಹಬ್ಬ-ಹರಿದಿನಗಳಲ್ಲಿ ಪ್ರಯಾಣಿಕರಿಂದ ಪ್ರಯಾಣ ದರಕ್ಕಿಂತ 3 ಪಟ್ಟು ದುಬಾರಿ ಹಣವನ್ನು ಪಡೆದು ಪ್ರಯಾಣಿಕರನ್ನು ಸುಲಿಗೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು, ಮಜಲು ವಾಹನಗಳಿಗೆ ಏಕ ರೂಪದ ಪ್ರಯಾಣ ದರವನ್ನು ನಿಗದಿಪಡಿಸಲಾಗಿದೆ. ಅದರಂತೆ, ಹಬ್ಬ-ಹರಿದಿನಗಳು ಮತ್ತು ಜಾತ್ರೆ ಸಮಯದಲ್ಲಿ ಒಂದುವರೆ ಪಟ್ಟು ಹೆಚ್ಚು ಪ್ರಯಾಣ ದರ ವಿಧಿಸಲು ಅವಕಾಶವಿರುತ್ತದೆ. ಖಾಸಗಿ ಸಾರಿಗೆ ಸಂಸ್ಥೆಗಳು ನಿಯಮ ಬಾಹಿರವಾಗಿ ಬಸ್ ದರವನ್ನು ವಸೂಲು ಮಾಡುತ್ತಿರುವ ಬಗ್ಗೆ ವಾಹನಗಳನ್ನು ಪ್ರವರ್ತನ ಕಾರ್ಯದ ಮೂಲಕ ತನಿಖೆ ಮಾಡಿ ಮೋಟಾರು ವಾಹನ ಕಾಯ್ದೆ ಕಲಂ 200 ಮತ್ತು 86 ರ ಅಡಿಯಲ್ಲಿ ಕ್ರಮ ಜರುಗಿಸಲಾಗುತ್ತಿದೆ. ಸರ್ಕಾರವು ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ದರವನ್ನು ಪ್ರಯಾಣಿಕರಿಂದ ವಸೂಲು ಮಾಡಬಾರದೆಂದು ಖಾಸಗಿ ಪ್ರವರ್ತಕರಿಗೆ ಮತ್ತು ಸಾರಿಗೆ ಸಂಸ್ಥೆಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಒಂದು ವೇಳೆ ವಸೂಲು ಮಾಡುತ್ತಿರುವುದು ಕಂಡು ಬಂದಲ್ಲಿ, ಮುಂದೆಯೂ ಸಹ ರಹದಾರಿಗಳ ಮೇಲೆ ಕಾನೂನು ರೀತ್ಯ ಕ್ರಮಕೈಗೊಳ್ಳಲಾಗುವುದು.
(ಆ)	ಖಾಸಗಿ ಬಸ್‌ಗಳಲ್ಲಿ ಪ್ರಯಾಣಿಕರ ಲಗೇಜ್‌ನ್ನು ಹೊರತು ಪಡಿಸಿ ಅಧಿಕ ಪ್ರಮಾಣದಲ್ಲಿ ಲಗೇಜ್‌ನ್ನು ಸಾಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	
(ಇ)	ಹಾಗಿದ್ದಲ್ಲಿ, ಖಾಸಗಿ ಬಸ್‌ಗಳನ್ನು ನಿಯಂತ್ರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ಮಾಹಿತಿಯನ್ನು ನೀಡುವುದು)	

ಟಿಡಿ 25 ಟಿಡಿಕ್ಯೂ 2019

(ಲಕ್ಷ್ಮಣ್ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿ ಹಾಗೂ ಸಾರಿಗೆ ಸಚಿವರು.